1	2	3	4
26. ಹೆದ್ದೂರು	15-00	24	ಎಸ್.ಟಿ. ಕೃಷ್ಣೇಗೌಡ
27. ಹೊಳೇಕೊಪ್ಪ	1-00-	67	ನವೀನ್
28. ಹೊಳೇಕೊಪ್ಪ	3-00	78	ನಟರಾಜ್

ಅ) ಈ ಹರಾಜಿನಿಂದ ಇದುವರೆಗೂ ಒಟ್ಟು ರೂ. 21,64,250-00 ಸಂಗ್ರಹವಾಗಿದೆ.

ಇ) ಅಂತಹ ಪ್ರಕರಣಗಳು ಯಾವುದೂ ಇರುವುದಿಲ್ಲ.

ಈ) ಅಂತಹ ಪ್ರಕರಣಗಳು ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ. ಎಲ್ಲಾ ಕಡೆ ಬಹಿರಂಗ ಹರಾಜು ಮಾಡಿ ಗುತ್ತಿಗೆಗಳನ್ನು ಮಂಜೂರು ಮಾಡಲಾಗಿದ್ದು, ಹರಾಜಿಗಿಂತ ಮುಂಚೆ ಇಲಾಖೆಯಿಂದ 5 ವರ್ಷದ ಅವಧಿಗೆ ಮಂಜೂರಾಗಿರುವ ಮರಳು ಗುತ್ತಿಗೆಗಳು ಕಾರ್ಯ ನಿರ್ವಹಿಸುತ್ತಿವೆ. ಅವುಗಳ ಅವಧಿ ಮುಗಿದ ನಂತರ ಹರಾಜು ಮಾಡಲು ಕ್ರಮ ಕೈಗೊಳ್ಳಲಾಗುವುದು.

ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗದವರ ಕಲ್ಯಾಣ

1559 (2033) ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

1) ಪ್ರಸಕ್ತ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರ ಕಲ್ಯಾಣಕ್ಕೆ ವಿವಿಧ ಇಲಾಖೆಯಡಿಯಲ್ಲಿ ಸರ್ಕಾರ ನಿಗದಿಪಡಿಸಿದ ಮೊತ್ತ ಎಷ್ಟು; ಈವರೆಗೆ ಖರ್ಚಾದ ಹಣ ಎಷ್ಟು?

2) ಪೂರ್ಣ ಹಣ ಬಿಡುಗಡೆಯಾಗದಿದ್ದಲ್ಲಿ ಕಾರಣಗಳೇನು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

1) 2002-03ನೇ ಸಾಲಿನಲ್ಲಿ ವಿಶೇಷ ಘಟಕ ಯೋಜನೆ / ಗಿರಿಜನ ಉಪಯೋಜನೆಯಡಿ ಒದಗಿಸಿದ ಅನುದಾನ, ಜನವರಿ ಅಂತ್ಯದವರೆಗೆ ಖರ್ಚಾದ ಅನುದಾನ ವಿವರ ಈ ಕೆಳಕಂಡಂತಿದೆ:

2) (ರೂ. ಲಕ್ಷಗಳಲ್ಲಿ)

ಕಾರ್ಯಕ್ರಮ	ನಿಗಧಿಪಡಿಸಿದ ಹಣ	ಬಿಡುಗಡೆಯಾದ ಹಣ	ಖರ್ಚಾದ ಹಣ
1. ವಿಶೇಷ ಘಟಕ ಯೋಜನೆ	66740.00	29474.00	29474.00
2. ಗಿರಿಜನ ಉಪ ಯೋಜನೆ	13067.00	6549.47	6549.47

ಪ್ರಸಕ್ತ ಆರ್ಥಿಕ ವರ್ಷದೊಳಗೆ ಉಳಿದ ಹಣವನ್ನು ಬಿಡುಗಡೆ ಮಾಡುವ ಸಂಭವವಿದೆ.

ಮಂಡ್ಯ ಜಿಲ್ಲೆಯಲ್ಲಿ ಶಾದಿಮಹಲ್‌ಗಳ ನಿರ್ಮಾಣ

1561 (2254) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ): ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯಲ್ಲಿ ಶಾದಿ ಮಹಲ್‌ಗಳನ್ನು ನಿರ್ಮಾಣ ಮಾಡಲು ಉದ್ದೇಶವಿದೆಯೇ?

ಆ) ಹಾಗಿದ್ದಲ್ಲಿ, ಈ ಪ್ರಸ್ತಾವನೆ ಬಗೆಗಿನ ವಿವರಗಳೇನು?

ಇ) ಶಾದಿಮಹಲ್‌ಗಳನ್ನು ನಿರ್ಮಾಣ ಮಾಡಲು ಈವರೆಗೆ ಎಷ್ಟು ಅನುದಾನ ನೀಡಲಾಗಿದೆ?